# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1235 (1261)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ವಸತಿ ಸಚಿವರು

ವಿಷಯ : ಶಿವಮೊಗ್ಗ ಜಿಲ್ಲೆಯಲ್ಲಿ ರಾಜೀವ್‌ಗಾಂಧಿ ವಸತಿ, ಬಸವ ವಸತಿ ಯೋಜನೆಯಡಿಯಲ್ಲಿ ನಿರ್ಮಾಣವಾಗಿರುವ ಮನೆಗಳ ಬಗ್ಗೆ

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ, ಬಸವ ವಸತಿ ಯೋಜನೆ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷದಲ್ಲಿ ಎಷ್ಟು ಮನೆಗಳು ನಿರ್ಮಾಣವಾಗಿವೆ ;

(ಆ) ಪ್ರಸ್ತುತ ಸಾಲಿನಲ್ಲಿ ಮೇಲ್ಕಂಡ ನಿಗಮಗಳ ವತಿಯಿಂದ ಎಷ್ಟು ಮನೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ ; (ತಾಲೂಕ್ಕುವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ವಸತಿ ಯೋಜನೆಯಲ್ಲಿ ಮಂಜೂರು ಆಗಿದ್ದ 3.00 ಲಕ್ಷ ಫಲಾನುಭವಿಗಳ ಮನೆಗಳನ್ನು ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತಡೆಹಿಡಿಯಲು ಕಾರಣವೇನು ; ಈ ತಡೆಹಿಡಿದ ವಸತಿ ಯೋಜನೆಯನ್ನು ತೆರವು ಮಾಡಲು ಸರ್ಕಾರ ಬಯಸಿದೆಯೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ವಸತಿ ಯೋಜನೆಗೆ ಬಿಡುಗಡೆಯಾದ ಅನುದಾನವೆಷ್ಟು; ಬಾಕಿ ಇರುವ ಫಲಾನುಭವಿಗಳ ವಿವರ ನೀಡುವುದು?